15ಶೇಊ 108

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಎಸ್ ಅರುಣ್ ಇವರು 330ರ ನಿಯಮ ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.

*****

**ಪ್ರಶ್ನೆ:-**

ಒಬ್ಬ ಅಧಿಕಾರಿಯನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಜಾಗೃತಾಧಿಕಾರಿ ಹುದ್ದೆಗೆ ನಿಯೋಜನೆ ಮಾಡಿ ನೇಮಕ ಮಾಡಲಾಗಿರುತ್ತದೆ. ಈ ಹುದ್ದೆಯ ಬಗ್ಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಹಲವು ಗೊಂದಲಗಳಿರುವುದಾಗಿ ಹಾಗೂ ಈ ನೇಮಕವು ನಿಯಮ ಬಾಹಿರವಾಗಿದೆಯೆಂದು ಹೇಳಲಾಗುತ್ತಿದೆ. ಅಲ್ಲದೆ ಇದೇ ಹುದ್ದೆಯನ್ನು ಬಳಸಿಕೊಂಡು ಸದರಿ ಅಧಿಕಾರಿಯು ಹಲವು ವಸತಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಭೇಟಿ ನೀಡಿ ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ವಿನಾ ಕಾರಣ ಕಿರುಕುಳ ನೀಡುತ್ತಿರುವುದಾಗಿ ತಿಳಿದು ಬಂದಿರುತ್ತದೆ.

ಆದ ಕಾರಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸದರಿ ಜಾಗೃತಾಧಿಕಾರಿ ಹುದ್ದೆಯ ಬಗ್ಗೆ ಇರುವ ನಿಯಮಗಳ ಬಗ್ಗೆ ವಿಸ್ತೃತವಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಚಿವರೊಂದಿಗೆ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:-**

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016, ದಿನಾಂಕ: 22.06.2016ರಲ್ಲಿ ಕರ್ನಾಟಕ ಸರ್ಕಾರದ ಸಚಿವಾಲಯ ಹಾಗೂ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಜಾಗೃತ ಕೋಶ (Vigilance Cells)ಗಳನ್ನು ಚಾಲನೆಗೊಳಿಸುವ ಕುರಿತಂತೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುವ ಹಿನ್ನೆಲೆಯಲ್ಲಿ, ಇಲಾಖೆಯ ಶೈಕ್ಷಣಿಕ ಹಿತದೃಷ್ಟಿಯಿಂದ ಶ್ರೀ ಕೃಷ್ಣಮೂರ್ತಿ ಆರ್., ಸಹಾಯಕ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯದ ನಿಯಮಿತ ಕರ್ತವ್ಯಗಳ ಜೊತೆಗೆ ಸದರಿಯವರ ಸೇವೆಯನ್ನು ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇಲ್ಲಿಗೆ ತಾತ್ಕಾಲಿಕವಾಗಿ ಜಾಗೃತಾಧಿಕಾರಿ (Vigilence Officer)ಯಾಗಿ ನೇಮಿಸಿಕೊಳ್ಳಲಾಗಿದೆ.

ಅದರಂತೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳು/ಯೋಜನೆಗಳ ಅನುಷ್ಠಾನ ಹಾಗೂ ವಸತಿ ಶಾಲೆ/ ಕಾಲೇಜುಗಳು/ ವಿದ್ಯಾರ್ಥಿನಿಲಯಗಳ ಕಾರ್ಯವೈಖರಿ, ದೈನಂದಿನ ಚಟುವಟಿಕೆ, ವಿದ್ಯಾರ್ಥಿಗಳ ಫಲಿತಾಂಶ ಮತ್ತು ವಿದ್ಯಾರ್ಥಿಗಳ ಸುರಕ್ಷತೆ ಹಿತದೃಷ್ಟಿಯಿಂದ, ಶಾಲಾ/ಕಾಲೇಜು/ವಸತಿ ನಿಲಯಗಳಿಗೆ ಭೇಟಿ ನೀಡಿ ಮೇಲ್ವಿಚಾರಣೆ/ ತಪಾಸಣೆ ನಡೆಸಿ, ಅಲ್ಲಿನ ಕುಂದುಕೊರತೆ/ ಸಮಸ್ಯೆಗಳನ್ನು ಪರಿಹರಿಸುವ ಕುರಿತು ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವ ಬಗ್ಗೆ ಸೂಚಿಸಲಾಗಿದೆ.

ಮುಂದುವರೆದು, ಶ್ರೀ ಕೃಷ್ಣಮೂರ್ತಿ ಆರ್., ಸಹಾಯಕ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ಸರ್ ಸೈಯದ್ ಅಹ್ಮದ್ ಖಾನ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ವತಿಯಿಂದ ಕೈಗೊಳ್ಳಲಾಗುತ್ತಿರುವ ಕ್ರಿಯಾ ಯೋಜನೆಯನ್ನು ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ವಹಿಸಲಾಗಿರುತ್ತದೆ.

...2

ಸದರಿ ಸೂಚನೆಗಳನ್ವಯ ಜಾಗೃತಾಧಿಕಾರಿ(Vigilence Officer) ರವರು ಸರ್ಕಾರಕ್ಕೆ ತಪಾಸಣಾ ವರದಿಗಳನ್ನು ಸಲ್ಲಿಸುತ್ತಿದ್ದು, ಸದರಿ ವರದಿಗಳ ಆಧಾರದ ಮೇಲೆ ಸ್ಥಳೀಯ ಕುಂದು ಕೊರತೆಗಳನ್ನು ತ್ವರಿತವಾಗಿ ನಿವಾರಿಸಲು ಕ್ರಮವಹಿಸಲಾಗುತ್ತಿದೆ.

ಈ ಕುರಿತು ಇಲಾಖೆಯ ಯಾವುದೇ ಶಾಲಾ/ಕಾಲೇಜುಗಳ ಸಿಬ್ಬಂದಿಗಳಿಗೆ ಕಿರುಕುಳ ನೀಡಿರುವ ಬಗ್ಗೆ ಸರ್ಕಾರದಲ್ಲಿ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ.

ಕಡತ ಸಂಖ್ಯೆ: **MWD-LMQ/101/2026**

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು